ಕರ್ನಾಟಕ ಸರ್ಕಾರ

T:3665

# ವಾಣಿಜ್ಯ ತೆರಿಗೆಗಳ ಇಲಾಖೆ

ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರವರ ಕಛೇರಿ (ಜಾಗೃತಿ) ವಾಣಿಜ್ಯ ತೆರಿಗೆ ಕಾರ್ಯಾಲಯ-2.
3ನೇ ಮಹಡಿ, 80 ಅಡಿರಸ್ತೆ ರಾಜೇಂದ್ರ ನಗರ, ಕೋರಮಂಗಲ, ಬೆಂಗಳೂರು-560047.

ಸಂ: ವಾತೆಜಂಆ(ಜಾ)/ಓಸಿಡಿ/ಟಿಡಿಆರ್-1/2024-25 ದಿನಾಂಕ: 16.02.2024

## ಟೆಂಡರ್ ಅಧಿಸೂಚನೆ

**ವಿಷಯ:** ದಿನಾಂಕ: 01.04.2024 ರಿಂದ 31.03.2025 ರ ಅವಧಿಗೆ ಈ ವಿಭಾಗಕ್ಕೆ 22 ಮಾಲೀಕರೇ ಚಾಲಕರಾಗಿರುವ ಖಾಸಗಿ ವಾಹನಗಳನ್ನು ಮಾಸಿಕ ಬಾಡಿಗೆ ಮೂಲಕ ಪಡೆದುಕೊಳ್ಳುವ ಬಗ್ಗೆ.

**ಉಲ್ಲೇಖ:** ಮಾನ್ಯ ವಾಣಿಜ್ಯ ತೆರಿಗೆಗಳ ಉಪ ಆಯುಕ್ತರು (ಸಂಚಲನ), ಬೆಂಗಳೂರು ರವರ ಪತ್ರ ಸಂಖ್ಯೆ: ವಿ.ಹೆಚ್.ಟಿ/ಸಿ.ಆರ್-20/2023-24 ದಿನಾಂಕ: 14.02.2024.

*********

ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು (ಜಾಗೃತಿ), ಕೋರಮಂಗಲ, ಬೆಂಗಳೂರು, ವಿಭಾಗದ ಬೆಂಗಳೂರು ಕಛೇರಿಗಳ ಉಪಯೋಗಕ್ಕಾಗಿ 20 (ಇಪ್ಪತ್ತು), ವಾಣಿಜ್ಯ ತೆರಿಗೆಗಳ ಸಹಾಯಕ ಆಯುಕ್ತರು (ಜಾರಿ), ರಾಮನಗರ ಕಛೇರಿಗೆ 01 (ಒಂದು) ಮತ್ತು ವಾಣಿಜ್ಯ ತೆರಿಗೆಗಳ ಸಹಾಯಕ ಆಯುಕ್ತರು (ಜಾರಿ), ಕೋಲಾರ ಕಛೇರಿಗೆ 01 (ಒಂದು) ಸೇರಿ ಒಟ್ಟು 22(ಇಪ್ಪತ್ತೆರಡು) ಮಾಲೀಕರೇ ಚಾಲಕರಾಗಿರುವ ಖಾಸಗಿ ವಾಹನಗಳನ್ನು ಮಾಸಿಕ ಬಾಡಿಗೆ ಆಧಾರದ ಮೇಲೆ ಪಡೆಯಲು ಉಲ್ಲೇಖದ ಪತ್ರದನ್ವಯ ಮಾನ್ಯ ವಾಣಿಜ್ಯ ತೆರಿಗೆಗಳ ಆಯುಕ್ತರು ಅನುಮತಿ ನೀಡಿರುತ್ತಾರೆ. ಅದರಂತೆ ಮಾಲೀಕರೇ ಚಾಲಕರಾಗಿರುವ ವಾಹನ ಚಾಲಕರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತ ಮಾಲೀಕರೇ ಚಾಲಕರಾಗಿರುವವರು ಮಾತ್ರ ಅರ್ಜಿಯನ್ನು ಸಲ್ಲಿಸುವುದು. ಸರ್ಕಾರಿ ಆದೇಶ ಸಂಖ್ಯೆ: ಆಇಸುಇ 96 ಶಿವಾನೀ 2012 ದಿನಾಂಕ: 23.08.2012 ರಲ್ಲಿ ನಿಗದಿಪಡಿಸಿರುವ ಷರತ್ತಿಗೊಳಪಟ್ಟು ಖಾಸಗಿ ವಾಹನಗಳ ಸೇವೆಯನ್ನು ಪಡೆಯಲಾಗುವುದು.

1. ಮಾನ್ಯ ವಾಣಿಜ್ಯ ತೆರಿಗೆಗಳ ಆಯುಕ್ತರವರ ಪರಿಷ್ಕರಣೆಯ ಸುತ್ತೋಲೆ ಸಂಖ್ಯೆ: ವಿ.ಹೆಚ್.ಟಿ/ಸಿ.ಆರ್-22/2019-20 ದಿನಾಂಕ: 27.04.2022 ರಲ್ಲಿ ನಿಗದಿಪಡಿಸಿರುವಂತೆ ವಾಹನಗಳ ಬಾಡಿಗೆ ದರ ಹವಾ ನಿಯಂತ್ರಣ ರಹಿತ ವಾಹನಗಳಿಗೆ ತಿಂಗಳಿಗೆ ರೂ.35,000=00 ನೀಡಲಾಗುವುದು.
2. 2018 ಮತ್ತು ನಂತರದ ವರ್ಷಗಳಲ್ಲಿ ತಯಾರಾದ ವಾಹನಗಳಾಗಿರಬೇಕು, ಪ್ರತಿ ವಾಹನದ ಗುಣಮಟ್ಟ ಹಾಗೂ ಚಾಲನಾ ಕೌಶಲ್ಯವನ್ನು ಪರಿಶೀಲಿಸಿ ನಂತರವೇ ವಾಹನಗಳನ್ನು ತೆಗೆದುಕೊಳ್ಳಲಾಗುವುದು.
3. ದಿನಾಂಕ: 01.04.2024 ರಿಂದ ಅನ್ವಯವಾಗುವಂತೆ ಈ ಹಿಂದೆ ಸತತವಾಗಿ 5 ವರ್ಷಗಳ ಕಾಲ ವಾಣಿಜ್ಯ ತೆರಿಗೆ ಇಲಾಖೆಯಲ್ಲಿ ಸೇವೆ ಸಲ್ಲಿಸಿರುವ ಯಾವುದೇ ಮಾಲೀಕರೇ ಚಾಲಕರಾಗಿರುವ ಖಾಸಗಿ ವಾಹನಗಳ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
4. ಗುತ್ತಿಗೆ ಅವಧಿ ದಿನಾಂಕ: 01.04.2024 ರಿಂದ 31.03.2025 ರವರೆಗೆ.
5. ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕ: 04.03.2024 ಸಂಜೆ 05:00 ಗಂಟೆಯವರೆಗೆ, ಆ ನಂತರ ಸಲ್ಲಿಸಿದ ಅರ್ಜಿಗಳನ್ನು ಪುರಸ್ಕರಿಸಲಾಗುವುದಿಲ್ಲ.

ವಾಣಿಜ್ಯ ತೆರಿಗೆಗಳ ಉಪ ಆಯುಕ್ತರು (ಸಂಚಾಲನ) ಆಯುಕ್ತರವರ ಕಛೇರಿ, ಬೆಂಗಳೂರು-9

ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು (ಜಾಗೃತಿ) ಕೋರಮಂಗಲ, ಬೆಂಗಳೂರು

# ಅರ್ಜಿಯೊಂದಿಗೆ ಸಲ್ಲಿಸಬೇಕಾದ ದಾಖಲಾತಿಗಳು/ವಿವರಗಳು

| ಕ್ರ.ಸಂ | ವಿವರಗಳು |
|---|---|
| 1 | ಅರ್ಜಿದಾರರ ಹೆಸರು, ವಿಳಾಸ ಹಾಗೂ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳು – 2 |
| 2 | ವಿಳಾಸದ ದಾಖಲೆಯಾಗಿ, ಮತದಾರರ ಗುರುತಿನ ಚೀಟಿ, ರೇಷನ್ ಕಾರ್ಡ್, ಆಧಾರ್ ಕಾರ್ಡ್, ಪಾಸ್ ಪೋರ್ಟ್ ಅಥವಾ ಇತರೆ ಭಾವಚಿತ್ರ ಹೊಂದಿರುವ ಗುರುತಿನ ಚೀಟಿ ಹಾಗೂ ಖಾಯಂ ವಿಳಾಸದ ದಾಖಲೆ, ಬ್ಯಾಂಕ್ ಖಾತೆಯ ವಿವರಗಳು/ಚೆಕ್‌ನ ಪ್ರತಿ. |
| 3 | ವಾಹನದ ನೋಂದಣಿ ಪುಸ್ತಕದ ಪ್ರತಿ–ಪ್ರಮಾಣ ಪತ್ರ (R.C. Card) |
| 4 | ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ನೀಡಿರುವ ವಾಹನದ ವಿಮಾ ಪಾಲಿಸಿಯ ಪ್ರತಿ |
| 5 | ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ನೀಡಿರುವ ವಾಹನ ಚಾಲನಾ ಪ್ರತಿ |
| 6 | ರಸ್ತೆ ತೆರಿಗೆ ಪಾವತಿಸಿರುವ ವಿವರ |
| 7 | ಮಾಲೀಕ/ಚಾಲಕರ ದೈಹಿಕ ಸಾಮರ್ಥ್ಯ ಪ್ರಮಾಣ ಪತ್ರ |
| 8 | ಪಾನ್ ಕಾರ್ಡ್ / ಆಧಾರ್ ಕಾರ್ಡ್ ಪ್ರತಿಗಳು |
| 9 | ಮೇಲ್ಕಂಡ ವಿವರಗಳು ಹಾಗೂ ಎಲ್ಲಾ ದಾಖಲಾತಿಗಳ ಪ್ರತಿಗಳನ್ನು ಸೀಲು ಮಾಡಿದ ಲಕೋಟೆಯಲ್ಲಿಟ್ಟು ಲಕೋಟೆಯ ಮೇಲೆ ದಪ್ಪ ಅಕ್ಷರಗಳಲ್ಲಿ **"ಖಾಸಗಿ ವಾಹನ ಮಾಲೀಕರೇ ಚಾಲಕರು ಹೊರಗುತ್ತಿಗೆ ಸೇವೆ ಸಲ್ಲಿಸಲು ಅರ್ಜಿ"** ಎಂದು ನಮೂದಿಸುವುದು. |
| 10 | ಅಪೂರ್ಣ ವಿವರಗಳು ಹಾಗೂ ಮೇಲ್ಕಂಡ ದಾಖಲಾತಿಗಳನ್ನು ಸಲ್ಲಿಸದೇ ಇದ್ದ ಪಕ್ಷದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು. |
| 11 | ಅರ್ಜಿಗಳನ್ನು ಖುದ್ದಾಗಿ ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು (ಜಾಗೃತಿ), ವಾಣಿಜ್ಯ ತೆರಿಗೆ ಕಾರ್ಯಾಲಯ–2, 3ನೇ ಮಹಡಿ, 80 ಅಡಿ ರಸ್ತೆ, ರಾಜೇಂದ್ರ ನಗರ, ಕೋರಮಂಗಲ, ಬೆಂಗಳೂರು–560047 ರವರ ಕಛೇರಿಯಲ್ಲಿ ಸಲ್ಲಿಸುವುದು ಹಾಗೂ ಅರ್ಜಿಗಳ ಸ್ವೀಕೃತಿಗೆ ಅನುಸಾರವಾಗಿ ಕ್ರಮ ಸಂಖ್ಯೆ ನೀಡಲಾಗುವುದು. |
| 12 | ಅರ್ಜಿಗಳನ್ನು ಸಲ್ಲಿಸಿರುವುದಕ್ಕೆ ಸ್ವೀಕೃತಿ ಪಡೆಯುವುದು, ಹಾಗೂ ಕಾರ್ಯ ನಿರ್ವಹಣೆಯಲ್ಲಿ ಪಾಲಿಸಬೇಕಾದ ನಿಯಮಗಳು/ಷರತ್ತುಗಳ ವಿವರಗಳ ಪಟ್ಟಿಯನ್ವಯ ನಿಯಮಗಳನ್ನು ಅರ್ಹಗೊಳ್ಳುವ ವಾಹನ ಮಾಲೀಕ/ಚಾಲಕರು ಕಡ್ಡಾಯವಾಗಿ ಪಾಲಿಸತಕ್ಕದ್ದು. |
| 13 | ಅರ್ಹಗೊಂಡ ಅರ್ಜಿದಾರರ ವಿವರಗಳ ಪಟ್ಟಿಯ ಪ್ರಕಟಣೆ ದಿನಾಂಕ: 16.03.2024 |

ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು
(ಜಾಗೃತಿ), ಬೆಂಗಳೂರು.

**ವಾಣಿಜ್ಯ ತೆರಿಗೆಗಳ ಜಂಟಿ ಆಯುಕ್ತರು**
**(ಜಾಗೃತಿ), ಬೆಂಗಳೂರು–47**